# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಆಸಿಡ್ ದಾಳಿಗೊಳಗಾದ ಮಹಿಳೆ /ಹೆಣ್ಣು ಮಕ್ಕಳಿಗೆ ರೂ.3000 ಗಳ ಮಾಸಿಕ ಪಿಂಚಣಿ ನೀಡುವ ಕುರಿತು.

**ಓದಲಾಗಿದೆ**
1. ಸರ್ಕಾರದ ಆದೇಶ ಸಂಖ್ಯೆ: ಮಮಇ 268 ಮಮಅ 2006, ದಿನಾಂಕ: 27/11/2007.
2. ಸರ್ಕಾರದ ಆದೇಶ ಸಂಖ್ಯೆ: ಮಮಇ 29 ರಾಮಅ 2013, ದಿನಾಂಕ:20.03.2015.
3. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಸ್ತಾವನೆ: ಮಮಇ 29 ರಾಮಅ 2015 ದಿ: 24/08/2015.

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶ (1) ರನ್ವಯ ರಾಜ್ಯ ಸರ್ಕಾರವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಸಿಡ್ ದಾಳಿಗೆ ಒಳಗಾದ ಮಹಿಳೆ ಮತ್ತು ಹೆಣ್ಣು ಮಕ್ಕಳಿಗೆ ಪರಿಹಾರ ಹಾಗೂ ಪುರ್ನವಸತಿ ಕಲ್ಪಿಸುವ ಸುರಕ್ಷಾ ಯೋಜನೆಯಡಿ 2003–04 ಸಾಲಿನಿಂದ ಆಸಿಡ್ ದಾಳಿಗೊಳಗಾದ ಮಹಿಳೆ/ಹೆಣ್ಣು ಮಕ್ಕಳಿಗೆ ರೂ.2.00 ಲಕ್ಷಗಳ ಪರಿಹಾರ ಧನವನ್ನು ನೀಡಲಾಗುತ್ತಿದ್ದು, ಉಲ್ಲೇಖ(2) ಆದೇಶದನ್ವಯ ಸದರಿ ಪರಿಹಾರ ಧನವನ್ನು ರೂ.3.00 ಲಕ್ಷಗಳಿಗೆ ಹೆಚ್ಚಿಸಲಾಗಿರುತ್ತದೆ.

ಮುಂದುವರೆದಂತೆ, ಆಸಿಡ್ ದಾಳಿಗೊಳಗಾದ ಮಹಿಳೆ /ಹೆಣ್ಣು ಮಕ್ಕಳು, ಶೇಕಡಾ 40 ಮತ್ತು ಅದಕ್ಕಿಂತ ಹೆಚ್ಚಿನ ಅಂಗವಿಕಲತೆಗೆ ಒಳಗಾಗಿದ್ದಲ್ಲಿ ಹಾಗೂ ನಗರ ಪ್ರದೇಶದಲ್ಲಿ ರೂ.17,000/– ಹಾಗೂ ಗ್ರಾಮೀಣ ಪ್ರದೇಶದಲ್ಲಿ ರೂ. 12,000/–ಗಳ ಆದಾಯ ಮಿತಿಗೆ ಒಳಪಟ್ಟಿದ್ದಲ್ಲಿ, ಕಂದಾಯ ಇಲಾಖೆಯಡಿ ಜಾರಿಯಲ್ಲಿರುವ ಅಂಗವಿಕಲ ವೇತನ ಯೋಜನೆಯಡಿ ಪಿಂಚಣಿ ಪಡೆಯಬಹುದಾಗಿದೆ. ಆದರೆ ಆಸಿಡ್ ದಾಳಿಗೊಳಗಾದ ಮಹಿಳೆಯರು ಸಮಾಜದ ವಿವಿಧ ಸ್ತರಗಳಲ್ಲಿ ಇರಬಹುದಾದರಿಂದ ಆಸಿಡ್ ದಾಳಿಗೆ ಒಳಗಾದ ಎಲ್ಲಾ ಮಹಿಳೆಯರಿಗೆ ಜೀವನ ನಿರ್ವಹಣೆಗೆ ಅನುಕೂಲ ಮಾಡಿಕೊಡುವ ಹಾಗೂ ಸಮಾಜದಲ್ಲಿ ಗೌರವಪೂರ್ವಕವಾಗಿ ಬದುಕಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಈಗಾಗಲೇ ಗುರುತಿಸಿರುವ ಆಸಿಡ್ ದಾಳಿಗೊಳಗಾದ ಮಹಿಳೆಯರಿಗೆ ರೂ. 3000.00ಗಳ ಮಾಸಿಕ ಸಹಾಯ ಧನ ನೀಡಲು ಸರ್ಕಾರವು ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 149 ಡಿಎಸ್‌ಪಿ 2015, ಬೆಂಗಳೂರು. ದಿನಾಂಕ:19.09.2015**

ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಸಿಡ್ ದಾಳಿಗೆ ಒಳಗಾದ ಮಹಿಳೆ ಮತ್ತು ಹೆಣ್ಣು ಮಕ್ಕಳಿಗೆ ಪರಿಹಾರ ಹಾಗೂ ಪುರ್ನವಸತಿ ಕಲ್ಪಿಸುವ ಸುರಕ್ಷಾ ಯೋಜನೆಯಡಿ ಈಗಾಗಲೇ ಗುರುತಿಸಿರುವ ಆಸಿಡ್ ದಾಳಿಗೊಳಗಾದ ಮಹಿಳೆ/ಹೆಣ್ಣು ಮಕ್ಕಳಿಗೆ ಆರ್ಥಿಕ ಭದ್ರತೆಯನ್ನೊದಗಿಸಿ ಸಮಾಜದಲ್ಲಿ ಗೌರವಪೂರ್ವಕವಾಗಿ ಬದುಕಲು ಅವಕಾಶ ಕಲ್ಪಿಸುವ ದೃಷ್ಠಿಯಿಂದ ರೂ. 3000.00/–(ಮೂರು ಸಾವಿರ ರೂಗಳು ಮಾತ್ರ)ಗಳ ಮಾಸಿಕ ಸಹಾಯಧನ ನೀಡಲು ಆದೇಶಿಸಿದೆ.

ಈ ಯೋಜನೆಯಡಿ ಸೌಲಭ್ಯ ಪಡೆಯಲು ಆದಾಯ ಮಿತಿ ಮತ್ತು ವಯೋಮಿತಿಯನ್ನು ನಿಗಧಿಪಡಿಸಿರುವುದಿಲ್ಲ

1. ಉದ್ದೇಶಿತ ಫಲಾನುಭವಿಯು ಈಗಾಗಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ, ಅಸಿಡ್ ದಾಳಿಗೆ ಒಳಗಾದ ಮಹಿಳೆ ಮತ್ತು ಹೆಣ್ಣು ಮಕ್ಕಳಿಗೆ ಪರಿಹಾರ ಹಾಗೂ ಪುರ್ನವಸತಿ ಕಲ್ಪಿಸುವ ಸುರಕ್ಷಾ ಯೋಜನೆಯಡಿ ಪರಿಹಾರ ಪಡೆದಿರಬೇಕು.
2. ಇತರೆ ಯಾವುದೇ ಸಾಮಾಜಿಕ ಭದ್ರತಾ ಯೋಜನೆಗಳಡಿ ಸೌಲಭ್ಯ ಪಡೆಯುತ್ತಿರಬಾರದು.

3. ಈ ಮಾಸಿಕ ಸಹಾಯಧನವನ್ನು ಅರ್ಜಿದಾರರ ವಾಸಸ್ಥಳ ವ್ಯಾಪ್ತಿಗೆ ಬರುವ ತಹಸೀಲ್ದಾರರು ಮಂಜೂರು ಮಾಡತಕ್ಕದ್ದು.
4. ಈ ಮಾಸಿಕ ಸಹಾಯಧನವನ್ನು ಫಲಾನುಭವಿಯ ಬ್ಯಾಂಕ್ ಖಾತೆಗೆ ಖಜಾನೆಯಿಂದ ಪ್ರತಿ ತಿಂಗಳು ವರ್ಗಾಯಿಸತಕ್ಕದ್ದು.
5. ಫಲಾನುಭವಿಯು ಮರಣ ಹೊಂದಿದ ಪಕ್ಷದಲ್ಲಿ ಮಾಸಿಕ ಸಹಾಯಧನವನ್ನು ರದ್ದುಪಡಿಸಲಾಗುವುದು.
6. ಈ ಯೋಜನೆಯಡಿ ತಗಲುವ ವೆಚ್ಚವನ್ನು 2015-16 ನೇ ಸಾಲಿನಲ್ಲಿ ಅಂಗವಿಕಲ ವೇತನ ಯೋಜನೆಯ ಲೆಕ್ಕ ಶೀರ್ಷಿಕೆಯಡಿ**"2235-02-101-0-20-V"**ರಡಿ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ:19-09-2015ರಂದು ಆರ್ಥಿಕ ಇಲಾಖೆಯು ಕಡತ ಸಂ.ಆರ್‌ಡಿ 149 ಡಿಎಸ್‌ಪಿ 2015ರ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಎಸ್.ಕಾತ್ಯಾಯಿನಿದೇವಿ), 19/9
ಪೀಠಾಧಿಕಾರಿ
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ
ಬೆಂಗಳೂರು.

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
7. ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ) ವಿಧಾನ ಸೌಧ, ಬೆಂಗಳೂರು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಎಲ್ಲಾ ಉಪ ವಿಭಾಗಧಿಕಾರಿಗಳು/ತಹಸೀಲ್ದಾರರುಗಳಿಗೆ.
12. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.